# National
# Kannada
# 31.12.2025 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಒಡಿಶಾದಲ್ಲಿ ಡಿಆರ್‌ಡಿಒದಿಂದ ಏಕಕಾಲದಲ್ಲಿ ಎರಡು ಪ್ರಳಯ್ ಕ್ಷಿಪಣಿಗಳ ಯಶಸ್ವಿ ಉಡಾವಣೆ
2. ವಿಕಸಿತ ಭಾರತ ಜಿ-ರಾಮ್-ಜಿ ಕಾಯ್ದೆಯಡಿಯಲ್ಲಿ ಮನ್ರೇಗಾ ಕಾರ್ಮಿಕರ ಉದ್ಯೋಗ ಸುರಕ್ಷಿತ – ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್
3. ನೂರು ಮಿಲಿಗ್ರಾಮ್‌ಗಿಂತ ಹೆಚ್ಚಿನ ಪ್ರಮಾಣದ ನೆಮಿಸುಲೈಡ್ ಔಷಧಗಳ ತಯಾರಿಕೆ, ಮಾರಾಟ ಹಾಗೂ ವಿತರಣೆ ನಿಷೇಧಿಸಿದ ಸರ್ಕಾರ
4. ಬೆಂಗಳೂರಿನ ಭಾರತೀಯ ಕ್ರೀಡಾ ಪ್ರಾಧಿಕಾರದಲ್ಲಿ 75 ಕೋಟಿ ರೂಪಾಯಿ ವೆಚ್ಚದ ಉನ್ನತ ಕಾರ್ಯಕ್ಷಮತೆ ಕೇಂದ್ರಕ್ಕೆ ಕೇಂದ್ರ ಸಚಿವ ಮನ್ಸುಖ್ ಮಾಂಡವಿಯಾ ಶಿಲಾನ್ಯಾಸ

***************

ರಕ್ಷಣಾ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆ–ಡಿಆರ್‌ಡಿಒ ಒಡಿಶಾದ ಕರಾವಳಿಯಲ್ಲಿ ಒಂದೇ ಲಾಂಚರ್‌ನಿಂದ ಎರಡು ಪ್ರಳಯ್ ಕ್ಷಿಪಣಿಗಳ ಸಾಲ್ವೋ ಉಡಾವಣೆಯನ್ನು ಯಶಸ್ವಿಯಾಗಿ ನಡೆಸಿದೆ. ಬಳಕೆದಾರರ ಮೌಲ್ಯಮಾಪನ ಪ್ರಯೋಗಗಳ ಭಾಗವಾಗಿ ಈ ಹಾರಾಟ ಪರೀಕ್ಷೆಯನ್ನು ನಡೆಸಲಾಯಿತು.

ಚಂಡಿಪುರದ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್ ನಿಯೋಜಿಸಲಾದ ಟ್ರ್ಯಾಕಿಂಗ್ ಸೆನ್ಸರ್‌ಗಳು ದೃಢಪಡಿಸಿದಂತೆ ಎರಡೂ ಕ್ಷಿಪಣಿಗಳು ಎಲ್ಲಾ ಹಾರಾಟದ ಉದ್ದೇಶಗಳನ್ನು ಪೂರೈಸುವ ಉದ್ದೇಶಿತ ಪಥವನ್ನು ಅನುಸರಿಸಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಕ್ಷಿಪಣಿಯನ್ನು ಹೈದರಾಬಾದ್‌ನ ಸಂಶೋಧನಾ ಕೇಂದ್ರ ಇಮಾರತ್ ಇತರ ಡಿಆರ್‌ಡಿಒ ಪ್ರಯೋಗಾಲಯಗಳ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಿದೆ. ಡಿಆರ್‌ಡಿಒ ಹಿರಿಯ ವಿಜ್ಞಾನಿಗಳು, ಭಾರತೀಯ ವಾಯುಪಡೆ ಮತ್ತು ಭಾರತೀಯ ಸೇನೆಯ ಬಳಕೆದಾರರ ಪ್ರತಿನಿಧಿಗಳು ಹಾಗೂ ಅಭಿವೃದ್ಧಿ ಮತ್ತು ಉತ್ಪಾದನಾ ಪಾಲುದಾರರು ಸೇರಿದಂತೆ ಉದ್ಯಮ ಪ್ರತಿನಿಧಿಗಳು ಪರೀಕ್ಷೆಗಳಿಗೆ ಸಾಕ್ಷಿಯಾದರು.

ಕ್ಷಿಪಣಿಗಳ ಯಶಸ್ವಿ ಉಡಾವಣೆಗಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಡಿಆರ್‌ಡಿಒ, ಭಾರತೀಯ ವಾಯುಪಡೆ, ಭಾರತೀಯ ಸೇನೆ, ರಕ್ಷಣಾ ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಉದ್ಯಮವನ್ನು ಶ್ಲಾಘಿಸಿದ್ದಾರೆ.

***************

ಹೊಸದಾಗಿ ಜಾರಿಗೆ ತಂದಿರುವ ವಿಕಸಿತ ಭಾರತ್ – ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ ಕಾಯ್ದೆ, 2025ರ ಅಡಿಯಲ್ಲಿ ಮನ್ರೇಗಾದಲ್ಲಿ ತೊಡಗಿರುವ ಕಾರ್ಮಿಕರ ಉದ್ಯೋಗವು ಸಂಪೂರ್ಣವಾಗಿ ಸುರಕ್ಷಿತವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ದೇಶಾದ್ಯಂತ ಸೇವೆ ಸಲ್ಲಿಸುತ್ತಿರುವ ಮನ್ರೇಗಾದ ಕಾರ್ಯಕರ್ತರ ಪ್ರತಿನಿಧಿಗಳೊಂದಿಗೆ ವೀಡಿಯೊ ಕಾನ್ಫರೆನ್ಸ್ ಮೂಲಕ ರಾಷ್ಟ್ರೀಯ ಮಟ್ಟದ ಸಂವಾದದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು ಈ ವಿಷಯ ತಿಳಿಸಿದರು.

ವಿಕಸಿತ ಭಾರತ್ – ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ –ಗ್ರಾಮೀಣ ಕಾಯ್ದೆ, 2025 ಅನ್ನು ಸ್ವಾಗತಿಸಿದ ಅವರು, ವೇತನ ಮತ್ತು ಗೌರವಧನ ವಿತರಣೆಗಳ ಬಗ್ಗೆ ಉದ್ಭವಿಸಿರುವ ಅನುಮಾನಗಳನ್ನು ಪರಿಹರಿಸಿದರು. ಹೊಸ ಚೌಕಟ್ಟಿನೊಳಗಿನ ಪ್ರಮುಖ ಬದಲಾವಣೆಗಳ ಬಗ್ಗೆ ವಿವರಿಸಿ, ಆಡಳಿತಾತ್ಮಕ ವೆಚ್ಚದ ಮಿತಿಯನ್ನು ಹಿಂದಿನ ಶೇಕಡ 6 ರಿಂದ ಶೇಕಡ 9 ಕ್ಕೆ ಹೆಚ್ಚಿಸಲಾಗಿದೆ ಎಂದು ಅವರು ಹೇಳಿದರು.

ಇದು ರಾಜ್ಯ ಸರ್ಕಾರಗಳು ಕಾರ್ಯಕರ್ತರಿಗೆ ತ್ವರಿತ ಮತ್ತು ವಿಶ್ವಾಸಾರ್ಹ ಪಾವತಿಗಳನ್ನು ಸುಗಮಗೊಳಿಸಲು ಅನುವು ಮಾಡಿಕೊಡುತ್ತದೆ ಮತ್ತು ಅವರ ಒಟ್ಟಾರೆ ಸೇವಾ ಪರಿಸ್ಥಿತಿಗಳನ್ನು ಸುಗಮಗೊಳಿಸುತ್ತದೆ, ಗ್ರಾಮೀಣ ಅಭಿವೃದ್ಧಿಗೆ ಹೆಚ್ಚು ಬೆಂಬಲ ನೀಡುವ ವಾತಾವರಣವನ್ನು ಬೆಳೆಸುತ್ತದೆ ಎಂದು ಅವರು ಹೇಳಿದರು. 2 ಲಕ್ಷಕ್ಕೂ ಹೆಚ್ಚು ಕಾರ್ಮಿಕರು ಚರ್ಚೆಯಲ್ಲಿ ಭಾಗವಹಿಸಿದ್ದರು.

***************

ಆರು ಪಥದ ನಾಸಿಕ್-ಸೋಲಾಪುರ ಕಾರಿಡಾರ್ ಮತ್ತು ಒಡಿಶಾದಲ್ಲಿ ರಾಷ್ಟ್ರೀಯ ಹೆದ್ದಾರಿ 326ರ ಅಗಲೀಕರಣ. ಮಹಾರಾಷ್ಟ್ರದಲ್ಲಿ 6 ಪಥದ ಹಸಿರು ಮೈದಾನ ಪ್ರವೇಶ-ನಿಯಂತ್ರಿತ, 374 ಕಿಲೋಮೀಟರ್ ಹೆದ್ದಾರಿ, ನಾಸಿಕ್-ಸೋಲಾಪುರ-ಅಕ್ಕಲ್ಕೋಟ್ ಕಾರಿಡಾರ್ ಅನ್ನು ಒಟ್ಟು 19 ಸಾವಿರದ 142 ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲು ಇಂದು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಸಂಪುಟ ಸಭೆಯ ನಂತರ ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಮಾತನಾಡಿ, ಈ ಯೋಜನೆಯು ನಾಸಿಕ್, ಅಹಲ್ಯಾನಗರ, ಸೋಲಾಪುರದಂತಹ ಪ್ರಮುಖ ಪ್ರಾದೇಶಿಕ ನಗರಗಳಿಂದ ಕರ್ನೂಲ್‌ಗೆ ಸಂಪರ್ಕ ಕಲ್ಪಿಸುತ್ತದೆ ಎಂದು ಹೇಳಿದರು.

ಪ್ರಧಾನಮಂತ್ರಿ ಗತಿಶಕ್ತಿ ರಾಷ್ಟ್ರೀಯ ಮಾಸ್ಟರ್ ಪ್ಲಾನ್ ತತ್ವದ ಅಡಿಯಲ್ಲಿ ಸಮಗ್ರ ಸಾರಿಗೆ ಮೂಲಸೌಕರ್ಯ ಅಭಿವೃದ್ಧಿಯನ್ನು ಸುಗಮಗೊಳಿಸುವಲ್ಲಿ ಈ ಮೂಲಸೌಕರ್ಯವು ಮಹತ್ವದ ಹೆಜ್ಜೆಯಾಗಿದೆ. ಇದು ಒಟ್ಟಾರೆ ಪ್ರಯಾಣದ ಸಮಯವನ್ನು ಸುಮಾರು 17 ಗಂಟೆಗಳವರೆಗೆ ಕಡಿಮೆ ಮಾಡುವುದರ ಜೊತೆಗೆ ಪ್ರಯಾಣಿಕ ಮತ್ತು ಸರಕು ಸಾಗಣೆ ವಾಹನಗಳಿಗೆ ಸುರಕ್ಷಿತ, ವೇಗವಾದ ಮತ್ತು ತಡೆರಹಿತ ಸಂಪರ್ಕವನ್ನು ನೀಡುತ್ತದೆ ಎಂದರು.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ದೇಶ ಮತ್ತು ವಿದೇಶಗಳ ನಾಗರಿಕರಿಗೆ 2026 ರ ಹೊಸ ವರ್ಷದ ಶುಭಾಶಯಗಳನ್ನು ತಿಳಿಸಿದ್ದಾರೆ.

ಹೊಸ ವರ್ಷವು ನವೀಕೃತ ಶಕ್ತಿ ಮತ್ತು ಸಕಾರಾತ್ಮಕ ಬದಲಾವಣೆಯನ್ನು ಸಂಕೇತಿಸುತ್ತದೆ ಎಂದು ರಾಷ್ಟ್ರಪತಿ ಸಾಮಾಜಿಕ ಮಾಧ್ಯಮದ ಸಂದೇಶದಲ್ಲಿ ತಿಳಿಸಿದ್ದಾರೆ.

2026 ಎಲ್ಲರಿಗೂ ಶಾಂತಿ, ಸಂತೋಷ ಮತ್ತು ಸಮೃದ್ಧಿಯನ್ನು ತರುತ್ತದೆ ಮತ್ತು ಬಲವಾದ ಮತ್ತು ಹೆಚ್ಚು ಸಮೃದ್ಧ ಭಾರತವನ್ನು ನಿರ್ಮಿಸಲು ಹೊಸ ಶಕ್ತಿಯನ್ನು ತುಂಬುತ್ತದೆ ಎಂದು ರಾಷ್ಟ್ರಪತಿಗಳು ಆಶಿಸಿದ್ದಾರೆ.

***************

ನೆಮಿಸುಲೈಡ್ 100 ಮಿಲಿಗ್ರಾಮ್‌ಗಿಂತ ಹೆಚ್ಚಿನ ಪ್ರಮಾಣವನ್ನು ಹೊಂದಿರುವ ಔಷಧಗಳ ತಯಾರಿಕೆ, ಮಾರಾಟ ಮತ್ತು ವಿತರಣೆಯನ್ನು ಸರ್ಕಾರವು ತಕ್ಷಣದಿಂದ ನಿಷೇಧಿಸಿದೆ.

ಈ ಕ್ರಮವನ್ನು ಔಷಧ ತಾಂತ್ರಿಕ ಸಲಹಾ ಮಂಡಳಿಯ ಸಲಹೆಯೊಂದಿಗೆ ಕೈಗೊಳ್ಳಲಾಗಿದ್ದು, ಔಷಧ ಮತ್ತು ಸೌಂದರ್ಯ ವಸ್ತುಗಳ ಕಾಯ್ದೆ, 1940ರ ಸೆಕ್ಷನ್ 26ಎ ಅಡಿಯಲ್ಲಿ ನಿಷೇಧಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಗಜೆಟ್ ಅಧಿಸೂಚನೆಯಲ್ಲಿ ತಿಳಿಸಿದೆ.

***************

ಕೇಂದ್ರ ಸಚಿವ ಮನ್ಸುಖ್ ಮಾಂಡವಿಯಾ ಬೆಂಗಳೂರಿನ ಭಾರತೀಯ ಕ್ರೀಡಾ ಪ್ರಾಧಿಕಾರ, ನೇತಾಜಿ ಸುಭಾಷ್ ದಕ್ಷಿಣ ಕೇಂದ್ರದಲ್ಲಿ 75 ಕೋಟಿ ರೂಪಾಯಿ ವೆಚ್ಚದ ಉನ್ನತ ಕಾರ್ಯಕ್ಷಮತೆ ಕೇಂದ್ರದ ಶಿಲಾನ್ಯಾಸವನ್ನು ವರ್ಚುವಲ್ ಮೂಲಕ ನೆರವೇರಿಸಿದರು.

ಈ ಉನ್ನತ ಕಾರ್ಯಕ್ಷಮತೆ ಕೇಂದ್ರವು ಕ್ರೀಡಾಪಟುಗಳು ಅತ್ಯುನ್ನತ ಅಂತಾರಾಷ್ಟ್ರೀಯ ಮಟ್ಟದಲ್ಲಿ ಶ್ರೇಷ್ಠತೆಯನ್ನು ಸಾಧಿಸಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು.

ಪ್ರಸ್ತಾವಿತ ಎಚ್‌ಪಿಸಿ ಪ್ರಮುಖ ಅಂತಾರಾಷ್ಟ್ರೀಯ ಕ್ರೀಡಾಕೂಟಗಳಿಗೆ ಭಾರತದ ಸಿದ್ಧತೆಗಳಲ್ಲಿ ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ ಮತ್ತು 2036ರ ಒಲಿಂಪಿಕ್ ಕ್ರೀಡಾಕೂಟವನ್ನು ಆಯೋಜಿಸುವ ಆಕಾಂಕ್ಷೆಗಳನ್ನು ಒಳಗೊಂಡಂತೆ ಜಾಗತಿಕ ಕ್ರೀಡಾ ಶಕ್ತಿಯಾಗಿ ಹೊರಹೊಮ್ಮುವ ದೇಶದ ದೀರ್ಘಕಾಲೀನ ದೃಷ್ಟಿಕೋನಕ್ಕೆ ಹೊಂದಿಕೆಯಾಗುತ್ತದೆ.

***************

2025 ರಲ್ಲಿ ನಡೆದ ಪ್ರಮುಖ ಘಟನಾವಳಿಗಳ ಕುರಿತ ವಿಶೇ..ಷ ಕಾರ್ಯಕ್ರಮ 'ಕಾಲಚಕ್ರ' ಇಂದು ಆಕಾಶವಾಣಿಯಲ್ಲಿ ಪ್ರಸಾರವಾಗಲಿದೆ. ಬೆಂಗಳೂರು ಆಕಾಶವಾಣಿಯ ಪ್ರಾದೇಶಿಕ ಸುದ್ದಿ ವಿಭಾಗ ಸಿದ್ಧಪಡಿಸಿರುವ 45 ನಿಮಿಷಗಳ ಈ ಕಾರ್ಯಕ್ರಮ ಇಂದು ರಾತ್ರಿ 9 ಗಂಟೆ 15 ನಿಮಿಷದಿಂದ 10 ಗಂಟೆಯವರೆಗೆ ಪ್ರಸಾರವಾಗಲಿದೆ.

ಈ ಕಾರ್ಯಕ್ರಮ ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದ ಏಕಕಾಲಕ್ಕೆ ಮೂಡಿಬರಲಿವೆ.

***************

ನವದೆಹಲಿಯ ರಾಯ್ ಪಿಥೋರಾ ಸಾಂಸ್ಕೃತಿಕ ಸಂಕೀರ್ಣದಲ್ಲಿ ಶನಿವಾರ ಪ್ರಧಾನಿ ನರೇಂದ್ರ ಮೋದಿ ಅವರು ಪವಿತ್ರ ಪಿಪ್ರವ್ಹಾ ಅವಶೇಷಗಳ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

19ನೇ ಶತಮಾನದ ಉತ್ತರಾರ್ಧದಲ್ಲಿ ಪತ್ತೆಯಾದ ಪಿಪ್ರವ್ಹಾ ಅವಶೇಷಗಳು, ಶಾಕ್ಯ ಕುಲದವರು ಪ್ರತಿಷ್ಠಾಪಿಸಿದ ಗೌತಮ ಬುದ್ಧನ ಮರಣದ ಅವಶೇಷಗಳೊಂದಿಗೆ ಸಂಬಂಧ ಹೊಂದಿವೆ ಎಂದು ವ್ಯಾಪಕವಾಗಿ ನಂಬಲಾಗಿದೆ.

ಪ್ರದರ್ಶನದಲ್ಲಿರುವ ಅವಶೇಷಗಳು ಪ್ರಪಂಚದಾದ್ಯಂತದ ಬೌದ್ಧ ಸಮುದಾಯಗಳಿಂದ ಪೂಜಿಸಲ್ಪಡುವ ಅಪಾರ ಐತಿಹಾಸಿಕ, ಪುರಾತತ್ವ ಮತ್ತು ಆಧ್ಯಾತ್ಮಿಕ ಮಹತ್ವದ ಅವಶೇಷಗಳನ್ನು ಒಳಗೊಂಡಿರುವುದರಿಂದ, ಈ ಕಾರ್ಯಕ್ರಮವು ದೇಶದ ಸಾಂಸ್ಕೃತಿಕ ಮತ್ತು ರಾಜತಾಂತ್ರಿಕ ಇತಿಹಾಸದಲ್ಲಿ ಒಂದು ಪ್ರಮುಖ ಕ್ಷಣವಾಗಿದೆ ಎಂದು ಸಂಸ್ಕೃತಿ ಸಚಿವಾಲಯ ಹೇಳಿದೆ.

***************

ಅಯೋಧ್ಯೆಯ ರಾಮಮಂದಿರದ ಪ್ರಾಣ ಪ್ರತಿಷ್ಠಾಪನೆಯ ಎರಡನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಉತ್ತರ ಪ್ರದೇಶದ ಅಯೋಧ್ಯೆ ನಗರದಲ್ಲಿ ಸಂಭ್ರಮ ಮನೆ ಮಾಡಿದೆ. ದೇಶದ ವಿವಿಧ ಭಾಗಗಳಿಂದ ಭಾರೀ ಸಂಖ್ಯೆಯ ಭಕ್ತರು ಅಯೋಧ್ಯೆಗೆ ಆಗಮಿಸುತ್ತಿದ್ದು, ಪವಿತ್ರ ನಗರಿ ಭಕ್ತಾದಿಗಳಿಂದ ತುಂಬಿ ತುಳುಕುತ್ತಿದೆ.

ಪ್ರಾಣ ಪ್ರತಿಷ್ಠಾ ದ್ವಾದಶಿ ಸಮಾರಂಭದಂತಹ ವಿಶೇಷ ಆಚರಣೆಗಳು ನಡೆಯುತ್ತಿದ್ದು, ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನೇತೃತ್ವದಲ್ಲಿ ಪ್ರಾರ್ಥನೆಗಳು ನಡೆದವು.

***************

ಮಧ್ಯಪ್ರದೇಶದ ಇಂದೋರ್ ಜಿಲ್ಲೆಯ ಭಾಗೀರಥಪುರ ಪ್ರದೇಶದಲ್ಲಿ ಕಲುಷಿತ ನೀರು ಸೇವಿಸಿ ಐವರು ಸಾವನ್ನಪ್ಪಿದ್ದಾರೆ. ವಾಂತಿ ಮತ್ತು ಅತಿಸಾರದ ಲಕ್ಷಣಗಳೊಂದಿಗೆ 35ಕ್ಕೂ ಹೆಚ್ಚು ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಮೃತರ ಕುಟುಂಬಗಳಿಗೆ ತಲಾ ಎರಡು ಲಕ್ಷ ರೂಪಾಯಿಗಳ ಪರಿಹಾರವನ್ನು ಘೋಷಿಸಿದ್ದಾರೆ.

***************

ಇಂದು ಢಾಕಾದ ಮಾನಿಕ್ ಮಿಯಾ ಅವೆನ್ಯೂನಲ್ಲಿ ಬಾಂಗ್ಲಾದೇಶದ ಮಾಜಿ ಪ್ರಧಾನಮಂತ್ರಿ ಹಾಗೂ ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಕ್ಷ ಅಧ್ಯಕ್ಷೆ ಬೇಗಂ ಖಾಲೆದಾ ಜಿಯಾ ಅವರ ಅಂತ್ಯಕ್ರಿಯೆ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.

ಈ ವೇಳೆ ಬಾಂಗ್ಲಾದೇಶದ ಮುಖ್ಯ ಸಲಹೆಗಾರ ಪ್ರೊಫೆಸರ್ ಮುಹಮ್ಮದ್ ಯೂನಸ್, ಮಧ್ಯಂತರ ಸರ್ಕಾರದ ಸದಸ್ಯರು, ಬಿಎನ್‌ಪಿ ನಾಯಕರು, ಇತರ ರಾಜಕೀಯ ಪಕ್ಷಗಳ ನಾಯಕರು ಹಾಗೂ ಮೂರೂ ಸಶಸ್ತ್ರ ಪಡೆಗಳ ಮುಖ್ಯಸ್ಥರು ಭಾಗವಹಿಸಿದ್ದರು.

ಭಾರತದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಸೇರಿದಂತೆ ನೇಪಾಳ, ಶ್ರೀಲಂಕಾ, ಪಾಕಿಸ್ತಾನ ಮತ್ತು ಇತರೆ ದಕ್ಷಿಣ ಹಾಗೂ ದಕ್ಷಿಣ ಪೂರ್ವ ಏಷ್ಯಾದ ದೇಶಗಳ ಪ್ರತಿನಿಧಿಗಳೂ ಅಂತಿಮ ನಮನ ಸಲ್ಲಿಸಿದರು.

*******ಮುಕ್ತಾಯ*******